# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 586 (616) |
| ಸದಸ್ಯರ ಹೆಸರು | : | ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 22.07.2024 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ 16 ಬೋಧಕ ವೃಂದದ ಬ್ಯಾಕ್‌ಲಾಗ್ ಹುದ್ದೆಗಳು ಭರ್ತಿ ಮಾಡಲು ಬಾಕಿಯಿರುತ್ತವೆ. |
| ಆ) | ಬಂದಿದ್ದಲ್ಲಿ, ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ ಎಷ್ಟು: ಈ ಹುದ್ದೆಗಳು ಯಾವುವು; ಈ ಹುದ್ದೆಗಳು ಯಾವ ದಿನಾಂಕದಿಂದ ಖಾಲಿ ಉಳಿದಿವೆ; ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದಿಂದ ಅನುಮತಿ ಪಡೆಯಲಾಗಿದೆಯೇ: ಸರ್ಕಾರ ಅನುಮತಿ ನೀಡಿದ್ದಲ್ಲಿ, ಈ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಸದರಿ ಬೋಧಕ ಹುದ್ದೆಗಳನ್ನು ಎಐಸಿಟಿಇ ನಿಯಮಗಳನ್ವಯ ಭರ್ತಿ ಮಾಡಬೇಕಾಗಿದ್ದು, ತತ್ಸಂಬಂಧ 7ನೇ ಪರಿಷ್ಕೃತ ಎಐಸಿಟಿಇ ವೇತನ ಶ್ರೇಣಿ ನಿಯಮಗಳು 2019 ಹಾಗೂ ರಾಜ್ಯ ಸರ್ಕಾರದ ನಿಯಮ/ಆದೇಶ/ಮಾರ್ಗಸೂಚಿಗಳನ್ನು ಅಳವಡಿಸಿಕೊಂಡು, ತಾಂತ್ರಿಕ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಮಗ್ರವಾಗಿ ಪರಿಷ್ಕರಿಸುವ ಪ್ರಸ್ತಾವನೆಯು ಪರಿಶೀಲನಾ ಹಂತದಲ್ಲಿರುತ್ತದೆ.<br><br>ಮುಂದುವರೆದು ಅನುದಾನಿತ ಇಂಜಿನಿಯರಿಂಗ್ ಕಾಲೇಜು ಹಾಗೂ ಪಾಲಿಟೆಕ್ನಿಕ್ ಸಂಸ್ಥೆಗಳ ಬೋಧಕ ಮತ್ತು ಬೋಧಕೇತರ ವೃಂದಗಳಲ್ಲಿ ಒಟ್ಟು 1746 ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸಲಾಗಿದ್ದು, ಇದರಲ್ಲಿ 560 ಬೋಧಕ ಮತ್ತು ಬೋಧಕೇತರ ಬ್ಯಾಕ್‌ಲಾಗ್ ಹುದ್ದೆಗಳನ್ನು ಈಗಾಗಲೇ ಭರ್ತಿ ಮಾಡಲಾಗಿದೆ.<br><br>ಉಳಿದ 1186 ಹುದ್ದೆಗಳಲ್ಲಿ ಸಂಸ್ಥೆ/ಕೋರ್ಸ್‌ಗಳು ರದ್ದುಗೊಂಡ ಹಾಗೂ ನಿಗದಿತ ಕಾರ್ಯಭಾರವಿರದ ಕಾರಣ ಮತ್ತು ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 02 ಬಿಇಎಂ 2024, ದಿ: 07.06.2024 ರಲ್ಲಿ ದತ್ತಾಂಶ ನಮೂದು ಸಹಾಯಕರು, ವಾಹನ ಚಾಲಕರು ಮತ್ತು 'ಡಿ' ವೃಂದದ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ತಿಳಿಸಿರುವ ಕಾರಣದಿಂದ 724 |

| | | |
|---|---|---|
| | | ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಸಾಧ್ಯವಾಗುತ್ತಿಲ್ಲ.<br><br>ಮುಂದುವರೆದು, 61 ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯು ಅಂತಿಮ ಹಂತದಲ್ಲಿದೆ. ಉಳಿದಂತೆ, 401 ಬ್ಯಾಕ್‌ಲಾಗ್ ಹುದ್ದೆಗಳನ್ನು ಶೀಘ್ರದಲ್ಲಿಯೇ ಭರ್ತಿ ಮಾಡಲು ಕ್ರಮವಹಿಸಲಾಗುವುದು. |

**ಸಂಖ್ಯೆ: ಇಡಿ 378 ಟಿಇಸಿ 2024**

**(ಡಾ॥ಎಂ.ಸಿ.ಸುಧಾಕರ್)**
**ಉನ್ನತ ಶಿಕ್ಷಣ ಸಚಿವರು**